ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು)

ಅ) ಚಿತ್ರದುರ್ಗ ಜಿಲ್ಲೆ ಹೊಸದುರ್ಗ ನಗರದ ಸರ್ವೆ ನಂ.31/4ಪಿ ಹಾಗೂ 31/4 ಪಿ–1ರಲ್ಲಿ ಚಿತ್ರದುರ್ಗ ಜಿಲ್ಲೆ ಜಿಲ್ಲಾಧಿಕಾರಿಗಳು ಹೊಸದುರ್ಗ ಪಾಲಿಟೆಕ್ನಿಕ್ ಕಾಲೇಜಿಗೆ 6 ಎಕರೆ 19 ಗುಂಟೆ ಸರ್ಕಾರಿ ಜಮೀನನ್ನು ಮಂಜೂರು ಮಾಡಿ ಆದೇಶ ಹೊರಡಿಸಿರುತ್ತಾರೆ. ಈ ಆದೇಶವನ್ನು ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಚಿತ್ರದುರ್ಗ ರದ್ದುಪಡಿಸಿರುತ್ತದೆ. ಆದಕಾರಣ ಸದರಿ ಸರ್ಕಾರಿ ಪಾಲಿಟೆಕ್ನಿಕ್‌ಗೆ ಬೇರೆ ಜಮೀನನ್ನು ನೀಡಲು ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುತ್ತದೆ.

ಮುಜರಾಯಿ ಇಲಾಖೆಯಿಂದ ಅನುದಾನ ಬಿಡುಗಡೆ

283 (313)

ಶ್ರೀ ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್

ಅ) ಮುಜರಾಯಿ ಇಲಾಖೆಯಿಂದ ಕಳೆದ ಎರಡು ಸಾಲಿನಲ್ಲಿ (2010–11, 2011–12) ಎಷ್ಟು ದೇವಾಲಯಗಳ ಜೀರ್ಣೋದ್ಧಾರ ಹಾಗೂ ಕಟ್ಟಡಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ; (ಮಾಹಿತಿ ನೀಡುವುದು)

ಆ) 2012–13ನೇ ಸಾಲಿನಲ್ಲಿ ಸಲ್ಲಿಸಿದ್ದ ಪ್ರಸ್ತಾವನೆಗಳ ಪೈಕಿ ಎಷ್ಟು ಪ್ರಸ್ತಾವನೆಗಳಿಗೆ ಮಂಜೂರಾತಿ ಮಾಡಲಾಗುವುದು; ಹಿಂದುಳಿದ ಪ್ರದೇಶದ ಪ್ರಸ್ತಾವನೆಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಕೋಟಾ ಶ್ರೀನಿವಾಸ ಪೂಜಾರಿ

(ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು)

ಅ) ಕಳೆದ ಎರಡು ವರ್ಷಗಳಿಂದ ದೇವಾಲಯಗಳ ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡಿರುವ ವಿವರ ಈ ಕೆಳಕಂಡಂತಿದೆ:–

ಕ್ರ ಸಂ.	ವರ್ಷ	ಸಂಸ್ಥೆಗಳ ಸಂಖ್ಯೆ	ಮಂಜೂರಾದ ಮೊತ್ತ (ರೂ.ಲಕ್ಷಗಳಲ್ಲಿ)
1	2010–11	2939	19910.75
2	2011–12	4253	16787.24

ಆ) 2012–13ನೇ ಸಾಲಿನಲ್ಲಿ ಅನುದಾನ ಕೋರಿ ಸ್ವೀಕೃತವಾಗಿರುವ ಮನವಿಗಳನ್ನು ಆಯವ್ಯಯದ ಲಭ್ಯತೆಗನುಗುಣವಾಗಿ ಬಿಡುಗಡೆ ಮಾಡಲಾಗುತ್ತಿದೆ. ಸಾಮಾನ್ಯ ಯೋಜನೆಯಡಿ ಎಲ್ಲಾ ವರ್ಗದ ಹಿಂದೂ ಧಾರ್ಮಿಕ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಮುದಾಯದ ದೇವಸ್ಥಾನಗಳ ಅಭಿವೃದ್ಧಿಗೆ ಆರಾಧನಾ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆ ಮತ್ತು ವಿಶೇಷ ಘಟಕ ಯೋಜನೆಯಡಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಬೀದರ್ ಜಿಲ್ಲೆಗೆ ಅನುದಾನ ಬಿಡುಗಡೆ

288 (405)

ಶ್ರೀ ಈಶ್ವರ ಭೀಮಣ್ಣ ಖಂಡ್ರೆ

ಅ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿಗೆ ಬರುವ ಮುಜರಾಯಿ ದೇವಸ್ಥಾನ ಹಾಗೂ ಮಠಗಳಿಗೆ ಕಳೆದ 3 ವರ್ಷಗಳಲ್ಲಿ ಸರ್ಕಾರವು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ (ವಿವರ ನೀಡುವುದು)

ಆ) ಈ ಅನುದಾನದಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ ಹಾಗೂ ಎಷ್ಟು ಬಾಕಿ ಇದೆ;

ಇ) ತಾಲ್ಲೂಕಿನ ಇನ್ನು ಅನೇಕ ಕಡೆ ದೇವಾಲಯ ಹಾಗೂ ಮಠಗಳಿಗೆ ಅನುದಾನ ಸಿಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಇಂತಹ ದೇವಸ್ಥಾನಗಳಿಗೂ ಶೀಘ್ರವಾಗಿ ಅನುದಾನ ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಕೋಟಾ ಶ್ರೀನಿವಾಸ ಪೂಜಾರಿ

(ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು)

ಅ) ಭಾಲ್ಕಿ ತಾಲ್ಲೂಕಿನ ಮುಜರಾಯಿ ದೇವಾಲಯಗಳಿಗೆ ಕಳೆದ 3 ವರ್ಷಗಳಲ್ಲಿ ಮುಜರಾಯಿ ದೇವಾಲಯಗಳಿಗೆ ಅನುದಾನ ಮಂಜೂರು ಮಾಡಿರುವ ವಿವರ ಈ ಕೆಳಕಂಡಂತೆ ಇದೆ.

ಕ್ರ.ಸಂ	ಆರ್ಥಿಕ ವರ್ಷ	ಮುಜರಾಯಿ ದೇವಸ್ಥಾನಗಳು	
		ದೇವಸ್ಥಾನದ ಹೆಸರು	ಮೊತ್ತ
1	2009–10	ಶ್ರೀ ಬಸವೇಶ್ವರ ದೇವಸ್ಥಾನ, ಕೋಸಂ ಗ್ರಾಮ. ಭಾಲ್ಕಿ	0.90
2	2010–11	ಶ್ರೀ ಸಂಗಮೇಶ್ವರ ದೇವಸ್ಥಾನ, ಹಾಲಹಳ್ಳಿ ಗ್ರಾಮ, ಭಾಲ್ಕಿ	2.00
3	2011–12	ಶ್ರೀ ಸಂಗಮೇಶ್ವರ ದೇವಸ್ಥಾನ, ಹಾಲಹಳ್ಳಿ ಗ್ರಾಮ. ಭಾಲ್ಕಿ	2.00